ವಿಷಯ :- ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಪದವಿ ಕಾಲೇಜುಗಳಲ್ಲಿ ಪ್ರವೇಶಕ್ಕೆ ಸಂಬಂಧಪಟ್ಟ ಹಾಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ 749 (1411)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

(ಅ) ಹುಬ್ಬಳ್ಳಿ- ಧಾರವಾಡ ಮಹಾನಗರದಲ್ಲಿ ಪದವಿ ಕಾಲೇಜುಗಳಲ್ಲಿ ಪ್ರವೇಶ ದೊರಕದೆ ವಿದ್ಯಾರ್ಥಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಕಾಲೇಜುಗಳಿಗೆ ಪ್ರವೇಶಕ್ಕೆ ಡೊನೇಷನ್ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಇ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡು ಕ್ರಮಗಳೇನು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :-

(ಅ) ಇಲ್ಲ.

(ಆ) ಇಲ್ಲ.

(ಇ) ಉದ್ಭವಿಸುವುದಿಲ್ಲ.

ವಿಷಯ :- ಧಾರವಾಡ ಜಿಲ್ಲೆಯಲ್ಲಿ ಪದವಿ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳ ಭರ್ತಿ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 750 (1410)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಧಾರವಾಡ ಜಿಲ್ಲೆಯಲ್ಲಿರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ಅವುಗಳಲ್ಲಿ ಒಟ್ಟು ಅನುದಾನಿತ ಮತ್ತು ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು?.

ಆ) ಸದರಿ ಕಾಲೇಜುಗಳಲ್ಲಿ ಕೊರತೆ ಇರುವುದು ನಿಜವೇ ಹಾಗಿದ್ದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :-

ಅ) ಧಾರವಾಡ ಜಿಲ್ಲೆಯಲ್ಲಿ ಇರುವ ಒಟ್ಟು ಪದವಿ ಕಾಲೇಜು ಸಂಖ್ಯೆ 67 ಅವುಗಳಲ್ಲಿ

ಅನುದಾನಿತ ಕಾಲೇಜುಗಳು	- 31
ಸರ್ಕಾರಿ ಪ್ರಾಥಮಿಕ ಕಾಲೇಜುಗಳು	- 10
ಅನುದಾನರಹಿತ ಪದವಿ ಕಾಲೇಜುಗಳು	- 26

ಅನುದಾನಿತ ಖಾಸಗಿ ಕಾಲೇಜುಗಳ ಬೋಧಕ ಸಿಬ್ಬಂದಿಗೆ ಸಂಬಂಧಿಸಿದಂತೆ ಆಡಳಿತ ಮಂಡಳಿಗಳು ನೇಮಕಾತಿ ಪ್ರಾಧಿಕಾರವಾಗಿದ್ದು, ಮಂಜೂರಾದ ಖಾಲಿ ಹುದ್ದೆಗಳನ್ನು ತುಂಬಲು ಆಡಳಿತ ಮಂಡಳಿಯು ಅನುಮತಿ ಕೋರಿದ ಪ್ರಕರಣಗಳಲ್ಲಿ